# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2331 |
| ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21.03.2022 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಓದುತ್ತಿರುವ ಮಕ್ಕಳ ಅಪೌಷ್ಠಿಕತೆ ನಿವಾರಿಸಲು ಜಾರಿಗೆ ತರಲಾದ ಮೊಟ್ಟೆ ಹಾಗೂ ಬಾಳೆಹಣ್ಣು ವಿತರಿಸುವ ಯೋಜನೆ ಜಾರಿಗೆ ಸರ್ಕಾರದಿಂದ ಒದಗಿಸಲಾದ ಅನುದಾನವೆಷ್ಟು; | ರಾಜ್ಯದ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 8 ನೇ ತರಗತಿಗಳ ವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಠಿಕಾಂಶದ ರೂಪದಲ್ಲಿ (Supplementary Nutrition) ಮೊಟ್ಟೆ ಅಥವಾ ಮೊಟ್ಟೆ ಸೇವಿಸದ ಮಕ್ಕಳಿಗೆ ಬಾಳೆಹಣ್ಣು ವಿತರಿಸುವ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ಒಟ್ಟಾರೆಯಾಗಿ ರೂ **3986.33 ಲಕ್ಷಗಳ** ಅನುದಾನವನ್ನು ಒದಗಿಸಲಾಗಿದ್ದು, ಸದರಿ ಅನುದಾನದಲ್ಲಿ **ರೂ 3269.61** ಲಕ್ಷಗಳ ಅನುದಾನ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿಗೆ ನಿಗದಿಯಾಗಿರುತ್ತದೆ. |
| ಆ) | ಸದರಿ ಯೋಜನೆಯಡಿಯಲ್ಲಿ ಮೊಟ್ಟೆ ವಿತರಣೆ ಕುರಿತು ಸಾರ್ವಜನಿಕರಿಂದ ವಿರೋಧ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಬಂದಿದೆ.<br><br>ಭಾರತ ಸಂವಿಧಾನದ ಅನುಚ್ಛೇದ– 21, 39 ಮತ್ತು 47 ರಂತೆ ನಾಗರೀಕರಿಗೆ ಅಗತ್ಯ ಪ್ರಮಾಣದಲ್ಲಿ ಆಹಾರವನ್ನು ಒದಗಿಸಿ ಪೌಷ್ಠಿಕಾಂಶವನ್ನು ಉತ್ತಮಪಡಿಸುವುದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಕರ್ತವ್ಯ ಹಾಗೂ ಜವಾಬ್ದಾರಿಯಾಗಿದೆ.<br><br>ಈ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ 06 ರಿಂದ 15ನೇ ವಯೋಮಾನದವರೆಗಿನ ಶಾಲಾ ಮಕ್ಕಳಲ್ಲಿ ಅಂದರೆ 1 ರಿಂದ 8ನೇ ತರಗತಿ ಮಕ್ಕಳಲ್ಲಿ ಅಪೌಷ್ಠಿಕತೆ, ರಕ್ತಹೀನತೆ ಹಾಗೂ ಬಹುಪೋಷಕಾಂಶಗಳ ನ್ಯೂನತೆ ಅಧಿಕವಾಗಿರುವುದು **National Family Health Survey - 2019-20** ಯಿಂದ ಕಂಡುಬಂದಕಾರಣ, ಇದರ ನಿವಾರಣೆಗಾಗಿ |

| | | |
|---|---|---|
| | | ರಾಜ್ಯದ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 8 ನೇ ತರಗತಿಗಳ ವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಠಿಕಾಂಶದ ರೂಪದಲ್ಲಿ (Supplementary Nutrition) ಮೊಟ್ಟೆ ಅಥವಾ ಮೊಟ್ಟೆ ಸೇವಿಸದ ಮಕ್ಕಳಿಗೆ ಬಾಳೆಹಣ್ಣು ವಿತರಿಸುವ ಕಾರ್ಯಕ್ರಮವನ್ನು ಮಧ್ಯಾಹ್ನ ಉಪಹಾರ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಅನುಮೋದನೆ ಪಡೆದು 2021-22ನೇ ಸಾಲಿನಲ್ಲಿ ಜಾರಿಗೆ ತರಲಾಗಿದೆ.<br><br>ಮೊಟ್ಟೆ ವಿತರಿಸುವ ಕಾರ್ಯಕ್ರಮಕ್ಕೆ ಕೆಲವು ಸಂಸ್ಥೆಗಳಿಂದ ವಿರೋಧ ವ್ಯಕ್ತವಾಗಿದ್ದರೂ, ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಫಲಾನುಭವಿ ವಿದ್ಯಾರ್ಥಿಗಳಿಂದ, ಪೋಷಕರಿಂದ ಮತ್ತು ಸಾರ್ವಜನಿಕರಿಂದ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಬೆಂಬಲ ವ್ಯಕ್ತವಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕವಾಗಿ ಹಾಗೂ ಶಾಲಾ ಹಂತದಲ್ಲಿ ಸದರಿ ಕಾರ್ಯಕ್ರಮಕ್ಕೆ ಬೆಂಬಲ ವ್ಯಕ್ತವಾದ ಕಾರಣ ಮೊಟ್ಟೆ/ಬಾಳೆ ಹಣ್ಣುಗಳನ್ನು ವಿತರಿಸುವ ಕಾರ್ಯಕ್ರಮವನ್ನು 2021-22ನೇ ಸಾಲಿನಲ್ಲಿ ಮುಂದುವರೆಸಿ ಸಂವಿಧಾನಿಕ ಜವಾಬ್ದಾರಿಯನ್ನು ನಿರ್ವಹಿಸಲಾಗಿದೆ. |
| ಇ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣದ ಗುಣಮಟ್ಟ ಕಾಪಾಡುವ ನಿಟ್ಟಿನಲ್ಲಿ 371ಜೆ ಅನ್ವಯ ರೂಪಿಸಲಾಗಿರುವ ನಿಯಮದಂತೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕನಿಷ್ಠ 10 ವರ್ಷಗಳ ಸೇವೆ ಕಡ್ಡಾಯಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ 371ಜೆ ಅನ್ವಯ ರೂಪಿಸಲಾಗಿರುವ ನಿಯಮ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಟ್ಟುನಿಟ್ಟಾಗಿ ಜಾರಿಗೆ ತರಲಾಗಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015 ಬೆಂಗಳೂರು ದಿನಾಂಕ: 27.04.2015ರಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಅಂದರೆ ಪ್ರಸ್ತುತ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ನೇಮಕಾತಿ ಹೊಂದಿರುವ ನೌಕರರನ್ನು, ಅವರ ನೇಮಕಾತಿ ದಿನಾಂಕದಿಂದ ಕನಿಷ್ಠ 10 ವರ್ಷಗಳವರೆವಿಗೂ ಹೈದ್ರಾಬಾದ್-ಕರ್ನಾಟಕ ಪ್ರದೇಶವನ್ನು ಅಂದರೆ ಪ್ರಸ್ತುತ ಕಲ್ಯಾಣ ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿ ವರ್ಗಾವಣೆ ಮಾಡಬಾರದೆಂದು ಸೂಚಿಸಲಾಗಿದೆ. ಸದರಿ ಆದೇಶವನ್ನು ಜಾರಿಗೆ ತರಲಾಗಿದೆ. |

| ಈ) | ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ವಿಭಾಗದಿಂದ ಬೇರೆ ವಿಭಾಗಕ್ಕೆ ವರ್ಗಾವಣೆ ಹೊಂದಿರುವ ಶಿಕ್ಷಕರ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಹತ್ತು ವರ್ಷ ಸೇವೆಯನ್ನು ಪೂರ್ಣಗೊಳಿಸಿದ ಬೇರೆ ವಿಭಾಗಕ್ಕೆ ವರ್ಗಾವಣೆಗೊಂಡ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಜಿಲ್ಲಾವಾರು ಮಾಹಿತಿ ಕೆಳಕಂಡಂತಿದೆ. |
|---|---|---|

| ಕ್ರ.ಸಂ | ಜಿಲ್ಲೆಯ ಹೆಸರು | ಕಲ್ಯಾಣ ಕರ್ನಾಟಕ ಭಾಗದಲ್ಲಿ ಹತ್ತು ವರ್ಷ ಸೇವೆಯನ್ನು ಪೂರ್ಣಗೊಳಿಸಿದ ನಂತರ ಬೇರೆ ವಿಭಾಗಕ್ಕೆ ವರ್ಗಾವಣೆಗೊಂಡ ಶಿಕ್ಷಕರ ಸಂಖ್ಯೆ | | |
|---|---|---|---|---|
| | | ಪ್ರಾಥಮಿಕ ಶಾಲೆ | ಪ್ರೌಢ ಶಾಲೆ | ಒಟ್ಟು |
| 1 | ಬೀದರ್ | 0 | 16 | **16** |
| 2 | ಬಳ್ಳಾರಿ | 18 | 16 | **34** |
| 3 | ಕಲಬುರಗಿ | 57 | 50 | **107** |
| 4 | ಕೊಪ್ಪಳ | 28 | 29 | **57** |
| 5 | ರಾಯಚೂರು | 0 | 21 | **21** |
| 6 | ಯಾದಗಿರಿ | 0 | 38 | **38** |
| | ಒಟ್ಟು | **103** | **170** | **273** |

ಇಪಿ 18 ಎಂಎಂಎಸ್ 2022

(ಬಿ.ಸಿ. ನಾಗೇಶ್)

**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**

**ಸಕಾಲ ಸಚಿವರು**